ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ (ನಿಲುವು)

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 26/1/2020

# ಸಿಎಎಗೆ ವಿರೋಧ ನಿರ್ಣಯ ಅಂಗೀಕರಿಸಿದ ರಾಜಸ್ಥಾನ

ಜೈಪುರ್: ಪೌರತ್ವ (ತಿದ್ದುಪಡಿ) ಕಾಯಿದೆಯನ್ನು ವಿರೋಧಿಸಿ ಕಾಂಗ್ರೆಸ್ ಆಡಳಿತದ ರಾಜಸ್ಥಾನ ವಿಧಾನಸಭೆಯಲ್ಲಿ ಶನಿವಾರ ನಿರ್ಣಯ ಅಂಗೀಕರಿಸಲಾಯಿತು. ಕೇರಳ, ಪಂಜಾಬ್ ನಂತರ ರಾಜಸ್ಥಾನ, ಪೌರತ್ವ ಕಾಯಿದೆಗೆ ವಿರೋಧಿಸಿರುವ ಮೂರನೇ ರಾಜ್ಯವಾಗಿದೆ. ಹಲವು ಬಿಜೆಪಿ ಸದಸ್ಯರು ಸದನದ ಬಾವಿಯೊಳಗೆ ಇಳಿದು ಪೌರತ್ವ ಕಾಯಿದೆಯ ಪರ ಘೋಷಣೆಗಳನ್ನು ಕೂಗಿ ಪ್ರತಿಭಟನೆ ನಡೆಸಿದರು.

ಶನಿವಾರ ಮಂಡಿಸಲಾಗಿರುವ ನಿರ್ಣಯದಲ್ಲಿ, ಕೇಂದ್ರ ಸರ್ಕಾರವು ಧರ್ಮದ ಆಧಾರದ ಮೇಲೆ ವಲಸಿಗರನ್ನು ಪ್ರತ್ಯೇಕಿಸುತ್ತಿರುವುದು, ಸಂವಿಧಾನದ ಉಲ್ಲಂಘನೆಯಾಗಿದೆ. ದೇಶದಲ್ಲಿ ಇದೇ ಮೊದಲ ಬಾರಿಗೆ ಧರ್ಮಾಧಾರಿತ ತಾರತಮ್ಯ ನಡೆಯುತ್ತಿದೆ. ಪೌರತ್ವ ಕಾಯಿದೆಯು ದೇಶದೆಲ್ಲೆಡೆ ತೀವ್ರ ದುಃಖ ಹಾಗೂ ಭಾರೀ ಪ್ರತಿಭಟನೆಗೆ ಕಾರಣವಾಗಿದೆ ಎಂದು ಹೇಳಿದೆ. ಎನ್‌ಆರ್‌ಸಿ (ರಾಷ್ಟ್ರೀಯ ಪೌರತ್ವ ದಾಖಲೆ) ಕಾಯಿದೆ ಕುರಿತೂ ಸಹ ನಿರ್ಣಯದಲ್ಲಿ ಉಲ್ಲೇಖಿಸಲಾಗಿದ್ದು, ಅಸ್ಸಾಂನಲ್ಲಿ ಕಳೆದ ವರ್ಷ ಬಿಡುಗಡೆಯಾದ ಪೌರರ ಪಟ್ಟಿಯಲ್ಲಿ 19 ಲಕ್ಷಕ್ಕೂ ಹೆಚ್ಚು ಜನರನ್ನು ಹೊರಗಿಡಲಾಗಿದೆ ಎಂದು ಹೇಳಿದೆ.

ಕಳೆದ ವಾರ ಸಿಎಎ ಕಾಯಿದೆಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿತ್ತು. ಕಾನೂನಿನ ಅರ್ಜಿಗಳಿಗೆ ಪ್ರತಿಕ್ರಿಯಿಸಲು ಕೇಂದ್ರ ಸರ್ಕಾರಕ್ಕೆ ನಾಲ್ಕು ವಾರಗಳ ಗಡುವು ನೀಡಿರುವುದರಿಂದ ಸರ್ಕಾರದ ವಾದವನ್ನು ಆಲಿಸದೇ ಯಾವುದೇ ತಡೆಯಾಜ್ಞೆ ನೀಡಲು ಸಾಧ್ಯವಿಲ್ಲವೆಂದು ಸ್ಪಷ್ಟಪಡಿಸಿತ್ತು.